## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 276
ಸದಸ್ಯರ ಹೆಸರು : ಶ್ರೀ ಹೆಚ್.ಎಸ್.ಗೋಪಿನಾಥ್
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 06.12.2023.
ಉತ್ತರಿಸುವ ಸಚಿವರು : ಕಂದಾಯ ಸಚಿವರು

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಬೆಂಗಳೂರು ಜಿಲ್ಲೆಯಲ್ಲಿರುವ ಕೆರೆ, ರಾಜಕಾಲುವೆ, ಗೋಮಾಳ ಹಾಗೂ ಸರ್ಕಾರಿ ಗುಂಡು ತೋಪುಗಳ ಸಂಖ್ಯೆ ಎಷ್ಟು;</td><td>ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿ ಕೆರೆ, ರಾಜಕಾಲುವೆ, ಗೋಮಾಳ ಹಾಗೂ ಸರ್ಕಾರಿ ಗುಂಡುತೋಪುಗಳ ಸಂಖ್ಯೆ ಈ ಕೆಳಕಂಡಂತಿದೆ.<br><br>
<table>
<tr><th>ಕ್ರ ಸಂ</th><th>ತಾಲ್ಲೂಕು</th><th>ಕೆರೆ</th><th>ರಾಜ ಕಾಲುವೆ</th><th>ಗೋಮಾಳ</th><th>ಗುಂಡು ತೋಪು</th></tr>
<tr><td>1</td><td>ಬೆಂಗಳೂರು ಉತ್ತರ</td><td>136</td><td>173</td><td>246</td><td>111</td></tr>
<tr><td>2</td><td>ಯಲಹಂಕ</td><td>128</td><td>163</td><td>213</td><td>167</td></tr>
<tr><td>3</td><td>ಬೆಂಗಳೂರು ಪೂರ್ವ</td><td>141</td><td>88</td><td>225</td><td>220</td></tr>
<tr><td>4</td><td>ಬೆಂಗಳೂರು ದಕ್ಷಿಣ</td><td>209</td><td>134</td><td>220</td><td>123</td></tr>
<tr><td>5</td><td>ಆನೇಕಲ್</td><td>254</td><td>56</td><td>289</td><td>97</td></tr>
</table></td></tr>
<tr><td>ಆ)</td><td>ಕೆರೆ, ರಾಜಕಾಲುವೆ, ಗೋಮಾಳ ಹಾಗೂ ಗುಂಡು ತೋಪುಗಳು ಒತ್ತುವರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದಯೇ:</td><td>ಬಂದಿರುತ್ತದೆ.</td></tr>
<tr><td>ಇ)</td><td>ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು:</td><td rowspan="2">ಸರ್ಕಾರಿ ಜಮೀನಿನ ಒತ್ತುವರಿಯನ್ನು ತೆರವುಗೊಳಿಸಲು ರಾಜ್ಯದ ಎಲ್ಲಾ ಜಿಲೆಗಳಲ್ಲಿ, ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಕಾರ್ಯ ಪಡೆಗಳನ್ನು ರಚಿಸಲಾಗಿದೆ. ಅದರಂತೆ ಎಲ್ಲಾ ಜಿಲ್ಲಾಧಿಕಾರಿಗಳು ಕಾಲಬದ್ಧ ಕ್ರಿಯಾ ಯೋಜನೆ ಸಿದ್ಧಪಡಿಸಿಕೊಂಡು, ಒತ್ತುವರಿ ಆಗಿರುವ ಸರ್ಕಾರಿ ಜಮೀನುಗಳನ್ನು ತೆರವುಗೊಳಿಸಲು ಕ್ರಮವಹಿಸುತ್ತಿದ್ದಾರೆ.</td></tr>
<tr><td>ಈ)</td><td>ಕೆರೆಗಳ ಹಾಗೂ ರಾಜಕಾಲುವೆಗಳ ಜಾಗದಲ್ಲಿ ಅನಧಿಕೃತ ಬಡಾವಣೆಗಳು ನಿರ್ಮಾಣಗೊಂಡಿರುವುದು ಸ್ಥಳೀಯ ಅಧಿಕಾರಗಳ ಗಮನಕ್ಕೆ ಬಂದಿದೆಯೇ:</td></tr>
<tr><td>ಉ)</td><td>ಅಕ್ರಮವಾಗಿ ಒತ್ತುವರಿ ಮಾಡಿಕೊಂಡವರ ಮೇಲೆ ಭೂ ಕಬಳಿಕೆ ಕೇಸುಗಳನ್ನು ದಾಖಲಿಸಲಾಗಿದೆಯೇ? (ದಾಖಲಿಸಿದ್ದಲ್ಲಿ ಅದರ ಪ್ರತಿಗಳನ್ನು ಒದಗಿಸುವುದು)</td><td>ಒತ್ತುವರಿ ಪ್ರಕರಣಗಳನ್ನು ಸಮರ್ಥವಾಗಿ ತಡೆಯುವ ಸಲುವಾಗಿ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯವನ್ನು ರಚಿಸಲಾಗಿದೆ. ಒತ್ತುವರಿದಾರರ ವಿರುದ್ಧ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲದಲ್ಲಿ, ಪ್ರಕರಣವನ್ನು ಕರ್ನಾಟಕ ಭೂ ಕಂದಾಯ ಕಾಯ್ದೆ 1964 ಕಲಂ 192-ಎ ರನ್ವಯ ದಾಖಲಿಸಲಾಗುತ್ತಿದೆ.<br><br>ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್‌ಡಿ 20 ಎಲ್‌ಜಿಪಿ 2020, ದಿ: 20.01.2020 ರಂತೆ ಸರ್ಕಾರಿ ಜಮೀನು ಒತ್ತುವರಿ ತೆರವುಗೊಳಿಸುವುದು, ಒತ್ತುವರಿದಾರರ ವಿರುದ್ಧ ಕ್ರಮ ಜರುಗಿಸುವುದು, ಒತ್ತುವರಿ ತೆರವುಗೊಳಿಸಲು ವಿಫಲರಾಗಿರುವ ಅಧಿಕಾರಿಗಳು/ಭೂ ಕಬಳಿಕೆಗೆ ದುಪ್ರೇರಣೆ ನೀಡಲು ನಕಲಿ ದಾಖಲೆಗಳನ್ನು ಸೃಷ್ಟಿಸಲು ಶಾಮೀಲಾಗಿರುವ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಕಾನೂನು/ಶಿಸ್ತು ಕ್ರಮಗಳನ್ನು ಜರುಗಿಸಲು ಸೂಚನೆ ನೀಡಲಾಗಿದೆ.<br><br>ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದಲ್ಲಿ ಅಕ್ಟೋಬರ್-2023ರ ಅಂತ್ಯಕ್ಕೆ ಒಟ್ಟು 21,712 ಪ್ರಕರಣಗಳು ದಾಖಲಾಗಿದ್ದು, ಈ ಪೈಕಿ 16,205 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ. 5,507 ಪ್ರಕರಣಗಳು ಬಾಕಿ ಇದೆ. ಕರ್ನಾಟಕ</td></tr>
</table>

| | | |
|---|---|---|
| | | ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದಲ್ಲಿ ವಿವಿಧ ಪ್ರಕರಣಗಳಲ್ಲಿ ಈವರೆಗೂ 75 ಜನರಿಗೆ ಒಂದು ವರ್ಷದಂತೆ ಶಿಕ್ಷೆ ಹಾಗೂ ದಂಡ ವಿಧಿಸಲಾಗಿದೆ.<br><br>ಬೆಂಗಳೂರು ಜಿಲ್ಲೆಯಲ್ಲಿ ಸರ್ಕಾರಿ ಜಮೀನುಗಳಿಗೆ ಸಂಬಂಧಿಸಿದಂತೆ ಎಲ್ಲಾ ದಾಖಲೆಗಳನ್ನು ಇಂಡೆಕ್ಸಿಂಗ್ ಅಂಡ್ ಕ್ಯಾಟಲಾಗಿಂಗ್ ಮತ್ತು ಸ್ಕ್ಯಾನಿಂಗ್ ಮಾಡಲಾಗಿದೆ.<br><br>ಭೂಮಿ ತಂತ್ರಾಂಶದಲ್ಲಿ ಎಲ್ಲಾ ಸರ್ಕಾರಿ ಜಮೀನುಗಳನ್ನು ಫ್ಲಾಗ್ ಮಾಡಲಾಗಿದೆ. ಇದರಿಂದ ಸರ್ಕಾರಿ ಜಮೀನುಗಳ ವಹಿವಾಟು ಮಾಡಲು ಅವಕಾಶವಿರುವುದಿಲ್ಲ.<br><br>ಒತ್ತುವರಿಯಿಂದ ತೆರವುಗೊಳಿಸಲಾದ ಸರ್ಕಾರಿ ಜಮೀನುಗಳಿಗೆ ಕಂದಕ, ತಂತಿಬೇಲಿ ಹಾಕಿ ಮತ್ತು ನಾಮಫಲಕ ಅಳವಡಿಸಿ ಸಂರಕ್ಷಿಸಲು ಕ್ರಮ ವಹಿಸಲಾಗುತ್ತಿದೆ.<br><br>ಖೋಟಾ ದಾಖಲೆಗಳು ಸೃಷ್ಟಿಯಾಗಿರುವಂತಹ ಪ್ರಕರಣಗಳಲ್ಲಿ ದಾಖಲೆಗಳ ನೈಜತೆ ಪರಿಶೀಲನೆಗಾಗಿ Forensic Lab ಗಳಿಗೆ (ವರ್ಷಗಳ ಅಂತರ ಗೊತ್ತಾಗುತ್ತದೆ) ಕಳುಹಿಸಲು ಕ್ರಮ ವಹಿಸಲಾಗುತ್ತಿದೆ.<br><br>ಬೆಂಗಳೂರು ನಗರ ಜಿಲ್ಲೆಯಲ್ಲಿ ವಿಶೇಷ ಜಾರಿದಳ ಕೋಶ ರಚಿಸಲಾಗಿದೆ.<br><br>ರಾಜ್ಯಾದ್ಯಾಂತ ಒಟ್ಟು 63,32,486 ಎಕರೆ/ಗುಂಟೆ ಸರ್ಕಾರಿ ಜಮೀನಿದ್ದು, ಇದರಲ್ಲಿ 14,72,493 ಎಕರೆ/ಗುಂಟೆ ಸರ್ಕಾರಿ ಜಮೀನು ಒತ್ತುವರಿ ಇದೆ. ವಿವಿಧ ನ್ಯಾಯಾಲಯಗಳಲ್ಲಿರುವ ಪ್ರಕರಣಗಳು, ಅಕ್ರಮ ಸಕ್ರಮ ಯೋಜನೆ ಮತ್ತು ಸಾರ್ವಜನಿಕ ಉದ್ದೇಶಗಳಿಗೆ ಬಳಕೆಯಾಗಿರುವ ಒಟ್ಟು 10,82,752 ಎಕರೆ/ಗುಂಟೆ ಜಮೀನು ಹೊರತುಪಡಿಸಿ, ಉಳಿದಂತೆ 3,89,741 ಎಕರೆ/ಗುಂಟೆ ಜಮೀನನ್ನು ಒತ್ತುವರಿಯಿಂದ ತೆರವುಗೊಳಿಸಬೇಕಾಗಿರುತ್ತದೆ. ಇದರಲ್ಲಿ 2,73,778 ಎಕರೆ/ಗುಂಟೆ ಸರ್ಕಾರಿ ಜಮೀನನ್ನು ಒತ್ತುವರಿಯಿಂದ ತೆರವುಗೊಳಿಸಲಾಗಿದೆ. ಉಳಿದಂತೆ 1,15,963 ಎಕರೆ/ಗುಂಟೆ ಜಮೀನನ್ನು ಒತ್ತುವರಿ ತೆರವುಗೊಳಿಸಲು ಬಾಕಿ ಇದೆ. |

ಸಂಖ್ಯೆ: ಆರ್‌ಡಿ122 ಎಲ್‌ಜಿಕ್ಯೂ 2023

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು